ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಸದರಿ ಗ್ರಾಮಕ್ಕೆ ಪ್ರೌಢಶಾಲೆಯ ಅವಶ್ಯಕತೆ ಬಗ್ಗೆ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

**ವಿಜಾಪುರ ಕ್ಷೇತ್ರದ ಹೊನ್ನುಟಗಿ ಗ್ರಾಮಕ್ಕೆ ಪದವಿ ಪೂರ್ವ ಕಾಲೇಜು ಸ್ಥಾಪನೆ.**

1551 - ಶ್ರೀ ಬಸವನಗೌಡ ರಾ. ಪಾಟೀಲ್ (ವಿಜಾಪುರ) : ಮಾನ್ಯ ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಬಿಜಾಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹೊನ್ನುಟಗಿ ಗ್ರಾಮಕ್ಕೆ ಪದವಿ ಪೂರ್ವ ಕಾಲೇಜು ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

*ಆ) ಹಾಗಿದ್ದಲ್ಲಿ ಪ್ರಸ್ತುತ ವರ್ಷದಿಂದಲೇ ಪದವಿ ಪೂರ್ವ ಕಾಲೇಜು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?*

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು) :

ಅ) ಬಿಜಾಪುರ ತಾಲ್ಲೂಕಿನಲ್ಲಿ ಈಗಾಗಲೇ 23 ಪದವಿ ಪೂರ್ವ ಕಾಲೇಜುಗಳು ಇದ್ದು ಅವುಗಳಲ್ಲಿ ಸಾಕಷ್ಟು ವಿದ್ಯಾರ್ಥಿಗಳು ಇಲ್ಲದೆ ಇರುವುದರಿಂದ ಹೊನ್ನುಟಗಿ ಗ್ರಾಮಕ್ಕೆ ಇನ್ನೊಂದು ಪದವಿ ಪೂರ್ವ ಕಾಲೇಜಿನ ಅವಶ್ಯಕತೆ ಕಂಡು ಬರುವುದಿಲ್ಲ.

ಆ) ಮೇಲಿನ ಉತ್ತರದಿಂದಾಗಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

**ಜವಾಹರ್ ನವೋದಯ ವಿದ್ಯಾಲಯಗಳ ಪ್ರಾರಂಭ.**

1555 - ಶ್ರೀ ಬಿ.ಬಿ. ಚಿಮ್ಮನಕಟ್ಟಿ (ಬಾದಾಮಿ) : ಮಾನ್ಯ ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ರಾಜ್ಯದಲ್ಲಿ ಎಷ್ಟು ಜಿಲ್ಲೆಗಳಲ್ಲಿ ಜವಾಹರ ನವೋದಯ ವಿದ್ಯಾಲಯಗಳನ್ನು ಎಲ್ಲಿ ಯಾವಾಗ ಪ್ರಾರಂಭಿಸಲಾಗಿದೆ? (ಸ್ಥಳಗಳ ವಿವರ)*

*ಆ) ಜಿಲ್ಲಾ ಪುನರ್ವಿಂಗಡನೆಯಾದ ಮೇಲೆ ಹೊಸದಾಗಿ ಯಾವ ಯಾವ ಜಿಲ್ಲೆಗಳಿಗೆ ನವೋದಯ ವಿದ್ಯಾಲಯಗಳನ್ನು ಪ್ರಾರಂಭಿಸಲಾಗಿದೆ? (ಸ್ಥಳಗಳ ವಿವರ)*

*ಇ) ಹಾಗಿದ್ದಲ್ಲಿ, ಬಾಗಲಕೋಟೆ ಜಿಲ್ಲೆ ಐತಿಹಾಸಿಕ ಪ್ರಸಿದ್ಧ ಬಾದಾಮಿಗೆ ಮಂಜೂರಾತಿ ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ?*

*ಈ) ಯಾವಾಗ ಮಂಜೂರಾತಿ ನೀಡಿ ನವೋದಯ ವಿದ್ಯಾಲಯ ಪ್ರಾರಂಭಿಸಲಾಗುವುದು?*